೪) ಬಿಎಲ್‌ಡಿಇಎ ವೈದ್ಯಕೀಯ ಕಾಲೇಜು, ಬಿಜಾಪುರ.

೫) ಶ್ರೀ ದೇವರಾಜ ಅರಸ್ ವೈದ್ಯಕೀಯ ಕಾಲೇಜು, ಕೋಲಾರ.

೬) ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜು, ತುಮಕೂರು.

ಆಲೂರು ಪಟ್ಟಣದಲ್ಲಿರುವ ಸಾರ್ವಜನಿಕ ಆಸ್ಪತ್ರೆಯ ಅಭಿವೃದ್ಧಿ

೬೫೩.(೧೧೮೨) ಶ್ರೀ ಬಿ. ಆರ್. ಗುರುದೇವ (ಸಕಲೇಶಪುರ).—ಮಾನ್ಯ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ :—

ಅ) ಆಲೂರು ಪಟ್ಟಣದಲ್ಲಿರುವ ಸಾರ್ವಜನಿಕ ಆಸ್ಪತ್ರೆಯು ಸಣ್ಣ ಕೊಠಡಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ, ಈ ವರ್ಷದಲ್ಲಿ ಈ ಆಸ್ಪತ್ರೆಯ ಅಭಿವೃದ್ಧಿಗಾಗಿ ಸರ್ಕಾರವು ಹಣ ನಿಗದಿಪಡಿಸಲಾಗಿದೆಯೇ?

ಆ) ಸಕಲೇಶಪುರ ತಾಲ್ಲೂಕು ಯಸಳೂರಿನಲ್ಲಿರುವ ಆಸ್ಪತ್ರೆಯು ಬಿದ್ದುಹೋಗಿದ್ದು ಸಾರ್ವಜನಿಕರಿಗೆ ಬಹಳ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ? ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಮುಂದೆ ತೆಗೆದುಕೊಳ್ಳಬೇಕಾದ ಕ್ರಮಗಳೇನು?

ಶ್ರೀಮತಿ ಮನೋರಮಾ ಮಧ್ವರಾಜ್ (ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಮಂತ್ರಿಗಳು).—

ಅ) ಆಲೂರು ಸಾರ್ವಜನಿಕ ಆಸ್ಪತ್ರೆಯು ಸಧ್ಯಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡದಲ್ಲಿಯೇ ನಡೆಯುತ್ತಿದೆ. ೧೯೯೦-೯೧ನೇ ಸಾಲಿಗೆ ಈ ಆಸ್ಪತ್ರೆಯ ಅಭಿವೃದ್ಧಿಗಾಗಿ ರೂ. ೨.೦೦ ಲಕ್ಷಗಳನ್ನು ಜಿಲ್ಲಾ ಪರಿಷತ್ ಯೋಜನಾ ವೆಚ್ಚದಲ್ಲಿ ನಿಗದಿಪಡಿಸಲಾಗಿದೆ.

ಆ) ಇಲ್ಲ.

ಆಲೂರು ಮತ್ತು ಸಕಲೇಶಪುರ ತಾಲ್ಲೂಕುಗಳಲ್ಲಿ ಪಿ. ಹೆಚ್. ಯು ಮತ್ತು ಪಿ. ಹೆಚ್. ಸಿ. ಆಸ್ಪತ್ರೆಗಳ ಸಂಖ್ಯೆ

೬೫೪.(೧೧೮೮) ಶ್ರೀ ಬಿ. ಆರ್. ಗುರುದೇವ (ಸಕಲೇಶಪುರ).—ಮಾನ್ಯ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ :—

ಅ) ಆಲೂರು ಮತ್ತು ಸಕಲೇಶಪುರ, ತಾಲ್ಲೂಕುಗಳಲ್ಲಿ ಇರುವ ಒಟ್ಟು ಪ್ರಾಥಮಿಕ ಆರೋಗ್ಯ ಘಟಕ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಆಸ್ಪತ್ರೆಗಳೆಷ್ಟು?

ಆ) ಈ ಆಸ್ಪತ್ರೆಗಳಲ್ಲಿ ಹಾಲಿ ಖಾಲಿ ಇರುವ ವೈದ್ಯರುಗಳ ನೇಮಕಕ್ಕೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀಮತಿ ಮನೋರಮಾ ಮಧ್ವರಾಜ್ (ಆರೋಗ್ಯ ಮತ್ತು ಕಲ್ಯಾಣಕುಟುಂಬಮಂತ್ರಿಗಳು).—

ಅ)

ತಾಲ್ಲೂಕು	ಪ್ರಾಥಮಿಕ ಆರೋಗ್ಯ ಕೇಂದ್ರ	ಪ್ರಾಥಮಿಕ ಆರೋಗ್ಯ ಘಟಕ
ಆಲೂರು	೩	೨
ಸಕಲೇಶಪುರ	೬	೬

ಆ) ಖಾಲಿ ಇರುವ ಹುದ್ದೆಗಳನ್ನು ಆದಷ್ಟು ಬೇಗ ತುಂಬಲಾಗುವುದು.